**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ,</u>**

**<u>ಪಿರಿಯಾಪಟ್ಟಣ.</u>**

**ಸಿ ಸಿ ಸಂಃ 613/2019**

| | | |
|---|---|---|
| ಸಾಕ್ಷಿಯ ಹೆಸರುಃ | ದೇವರಾಜು | ಫ್ರಾಸಾಃಃ 11 |
| ತಂದೆಯ ಹೆಸರುಃ | ಮದೇಗೌಡ | ಚಾಸಾಃಃ 11 |
| ವಯಸ್ಸುಃ | 41 ವರ್ಷ | ಪ್ರಮಾಣೀಕರಿಸಿದ<br>ದಿಃ 03/06/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಕೋಲೂರು ಗ್ರಾಮ,<br>ಕೆ.ಆರ್ ನಗರ ತಾಲ್ಲೂಕು. | |

<u>**ಮುಖ್ಯ ವಿಚಾರಣೆಃ** ಮಾನ್ಯ **ಸಸಅ ರಿಂದಃ**</u>

ನನಗೆ ಚಾಸಾ-10 ಗೊತ್ತಿಲ್ಲ. ನನಗೆ ನ್ಯಾಯಾಲಯದ ಮುಂದಿರುವ ಆರೋಪಿತ ಯಾರೆಂದು ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ನಾನು ಘಟನೆಯನ್ನು ಪ್ರತ್ಯಕ್ಷವಾಗಿ ನೋಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಸಅ ರವರಿಂದಃ</u>**

ನಾನು ಪ್ರತಿ ತಿಂಗಳು 27 ಕೆ.ಜಿ ಅಕ್ಕಿ ಮತ್ತು 5 ಕೆ.ಜಿ ಗೋದಿಯನ್ನು ಬಿಪಿಎಲ್ ಕಾರ್ಡಿನಿಂದ ಪಡೆದು ಆರೋಪಿತನಿಗೆ ನೀಡುತ್ತಿದ್ದೆ ಎಂದರೆ ಸರಿಯಲ್ಲ. ಅದನ್ನು ಅವರು ದಾಸ್ತಾನು ಹೊಂದಿ ಬೇರೆ ಮೂಟೆಯಲ್ಲಿ ತುಂಬಿ ತೆಗೆದುಕೊಂಡು ಹೋಗುತ್ತಿದ್ದಾಗ ಆಹಾರ ಇಲಾಖೆಯವರು ಅವರನ್ನು ಹಿಡಿದು ವಿಚಾರಣೆ ಮಾಡಿದರು ಎಂದರೆ ಸರಿಯಲ್ಲ. ಆ ಮೂಲಕ ಆರೋಪಿತ ಸರ್ಕಾರಕ್ಕೆ ಸೇರಿದ ಅಕ್ಕಿ ಮತ್ತು ಗೋದಿಯನ್ನು ಅಕ್ರಮವಾಗಿ

ದಾಸ್ತಾನು ಹೊಂದಿ ಮಾರಾಟ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ.14** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**